# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 27.09.2022ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2022–23ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಗಳು.**

ಉಪಸ್ಥಿತರು

ಅನುಪಸ್ಥಿತರು

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿದರು.

- **ಕೃತಜ್ಞತೆ:**

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(X) ಹಾಗೂ ವಿದ್ಯಾರ್ಥಿ ಪ್ರತಿನಿಧಿಗಳನ್ನು ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ನಾಮ ನಿರ್ದೇಶನ ಮಾಡುವ ಪರಿನಿಯಮದ ಪ್ರಕಾರ ನಾಮನಿರ್ದೇಶನಗೊಂಡಿದ್ದ ಕುಮಾರಿ ಪ್ರಜ್ಞಾ ಕೆ., ದ್ವಿತೀಯ ಬಿ.ಎಸ್ಸಿ., ಪೂರ್ಣ ಪ್ರಜ್ಞಾ ಕಾಲೇಜು, ಉಡುಪಿ (ಕ್ರೀಡಾ ಕ್ಷೇತ್ರ) ಪರಿನಿಯಮದ ಪಾರಾ 6 ರ ಪ್ರಕಾರ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರು ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## I. ದಿನಾಂಕ 16.06.2022ರಂದು ನಡೆದ ಶೈಕ್ಷಣಿಕ ಮಂಡಳಿಯ 2022–23ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

ದೃಢೀಕರಿಸಲಾಯಿತು.

## II. ಘನತೆವೆತ್ತ ಕುಲಾಧಿಪತಿಗಳಿಗಳಿಂದ ಅನುಮೋದನೆಗೊಡ ಪರಿನಿಯಮ / ವಿನಿಯಮಗಳು.

ಏನೂ ಇರುವುದಿಲ್ಲ.

## III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:1(2022–23) |
| **ವಿಷಯ:** | ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ M.Sc. Data Science ಎಂಬ ಹೊಸ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಬಗ್ಗೆ. |
| **ನಿರ್ಣಯ:** | ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:2(2022–23)

**ವಿಷಯ:** ಸಂತ ಆಗ್ನೆಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಬಿ.ಸಿ.ಎ. ಕಾರ್ಯಕ್ರಮಕ್ಕೆ 70 ವಿದ್ಯಾರ್ಥಿ ಪರಿಮಿತಿಯೊಂದಿಗೆ ಹೆಚ್ಚುವರಿ ವಿಭಾಗಕ್ಕೆ (ಸ್ವಾಯತ್ತ ಸ್ಥಾನಮಾನದೊಂದಿಗೆ) ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಹೆಚ್ಚುವರಿ ವಿಭಾಗಕ್ಕೆ ಅನುಮತಿ ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:3(2022–23)

**ವಿಷಯ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜು (ಸ್ವಾಯತ್ತ), ಉಜಿರೆ ಇಲ್ಲಿ ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಬಿ.ಕಾಂ. ಕಾರ್ಯಕ್ರಮದ 80ರ ವಿಭಾಗಕ್ಕೆ 10 ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ (ಸ್ವಾಯತ್ತ ಸ್ಥಾನಮಾನದೊಂದಿಗೆ) ನೀಡುವ ಬಗ್ಗೆ.

**ನಿರ್ಣಯ:** ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಯನ್ನು ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:4(2022–23)

**ವಿಷಯ:** ಬಿ.ಡಿ.ಶೆಟ್ಟಿ ಕಾಲೇಜ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್, ಮಾಬುಕಳಾ, ಉಡುಪಿ ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಬದಲಾವಣೆ ಬಗ್ಗೆ.

**ನಿರ್ಣಯ:** ನಿಯಮಾನುಸಾರ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:5(2022–23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲ್ಪಡುವ ಎಂ.ಎಸ್ಸಿ. ಅನ್ವಯಿಕ ರಸಾಯನಶಾಸ್ತ್ರ ಕಾರ್ಯಕ್ರಮಕ್ಕೆ ಬದಲಾಗಿ ಎಂ.ಎಸ್ಸಿ. ಅನಾಲಿಟಿಕಲ್ ಕೆಮಿಸ್ಟ್ರಿ ಸ್ನಾತಕೋತ್ತರ ಕಾರ್ಯಕ್ರಮವನ್ನು ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಪ್ರಾರಂಭಿಸುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:6(2022–23)

**ವಿಷಯ:** ಸಂತ ಆಗ್ನೆಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಬಿ.ಎ ಮತ್ತು ಬಿ.ಎಸ್ಸಿ. ಕಾರ್ಯಕ್ರಮದಲ್ಲಿ ಹೊಸ ಕೋರ್ಸುಗಳನ್ನು ಪ್ರಾರಂಭಿಸುವ ಹಾಗೂ ಸ್ನಾತಕೋತ್ತರ ಕಾರ್ಯಕ್ರಮಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ನೀಡುವ ಬಗ್ಗೆ.

**ನಿರ್ಣಯ:** ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಹೊಸ ಕೋರ್ಸುಗಳನ್ನು ಪ್ರಾರಂಭಿಸುವ ಮತ್ತು ಸ್ನಾತಕೋತ್ತರ ಬಿಗ್ ಡಾಟಾ ಅನಾಲಿಟಿಕ್ಸ್ ಕಾರ್ಯಕ್ರಮಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಯನ್ನು ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:7(2022–23)

**ವಿಷಯ:** ಸಂತ ಆಗ್ನೆಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಎಂ.ಬಿ.ಎ. ಮತ್ತು ಎಂ.ಸಿ.ಎ. ಕಾರ್ಯಕ್ರಮಗಳನ್ನು ಸ್ವಾಯತ್ತ ಸ್ಥಾನಮಾನದೊಂದಿಗೆ ಪ್ರಾರಂಭಿಸುವ ಕುರಿತು.

**ನಿರ್ಣಯ:** ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಎಂ.ಬಿ.ಎ. ಮತ್ತು ಎಂ.ಸಿ.ಎ. ಹೊಸ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:8(2022–23)

**ವಿಷಯ:** ಸ್ಕೂಲ್ ಆಫ್ ಸೋಷಿಯಲ್ ವರ್ಕ್, ರೋಶನಿ ನಿಲಯ (ಸ್ವಾಯತ್ತ), ಮಂಗಳೂರು ಇಲ್ಲಿ ಬಿ.ಕಾಂ. ಕಾರ್ಯಕ್ರಮವನ್ನು ಪ್ರಾರಂಭಿಸಲು ಮತ್ತು M.Sc. in Criminology and Forensic Science ಸ್ನಾತಕೋತ್ತರ ಕಾರ್ಯಕ್ರಮಕ್ಕೆ 10 ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿ ನೀಡುವ ಬಗ್ಗೆ.

**ನಿರ್ಣಯ:** ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಬಿ.ಕಾಂ. ಹೊಸ ಕೋರ್ಸ್‌ನ್ನು ಪ್ರಾರಂಭಿಸುವ ಮತ್ತು ಸ್ನಾತಕೋತ್ತರ Criminology and Forensic Science ಕಾರ್ಯಕ್ರಮಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಯನ್ನು ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:9(2022–23)

**ವಿಷಯ:** ಕಾಲೇಜುಗಳ/ವಿದ್ಯಾಸಂಸ್ಥೆಗಳ ತಾತ್ಕಾಲಿಕ ಸಂಯೋಜನೆಯ ಅನುಶಾಸನದ ಪರಿಷ್ಕರಣೆಯ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಗಿ ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:10(2022–23)

**ವಿಷಯ:** ಘಟಿಕೋತ್ಸವ ಕಾರ್ಯಕ್ರಮವನ್ನು ನಿಯಂತ್ರಿಸುವ ಪರಿನಿಯಮಕ್ಕೆ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಗಿ ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:11(2022–23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ B.Sc.(Basic/Hons) ಬಯೋಟೆಕ್ನಾಲಜಿ ಬಹುಶಿಸ್ತೀಯ (Multi disciplinary) ಸ್ನಾತಕ ಕಾರ್ಯಕ್ರಮನ್ನು ಪ್ರಾರಂಭಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:12(2022–23)

**ವಿಷಯ:** ಶೈಕ್ಷಣಿಕ ವರ್ಷ 2022–23ರಿಂದ 2031–32ರ ವರೆಗೆ ವಿವೇಕಾನಂದ ಕಾಲೇಜ್ ಆಫ್ ಆರ್ಟ್, ಸಾಯನ್ಸ್ ಆಂಡ್ ಕಾಮರ್ಸ್ ನೆಹರೂ ನಗರ, ಪುತ್ತೂರು, ದ.ಕ. ಎಂಬ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:13(2022–23)
**ವಿಷಯ:** ಏಕಕಾಲದಲ್ಲಿ ಎರಡು ಶೈಕ್ಷಣಿಕ ಕಾರ್ಯಕ್ರಮಗಳನ್ನು ಅಧ್ಯಯನ ಮಾಡಲು ಅವಕಾಶ ಕಲ್ಪಿಸಿಕೊಡುವ ಮಾರ್ಗಸೂಚಿಗಳ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:14(2022–23)
**ವಿಷಯ:** ಮಹಿಳಾ ವಿದ್ಯಾರ್ಥಿಗಳಿಗೆ ಹೆರಿಗೆ ರಜೆ / ಮಕ್ಕಳ ಆರೈಕೆ ರಜೆಯನ್ನು ಒದಗಿಸುವ ಬಗ್ಗೆ ರಚಿಸಲಾದ ನಿಯಮಗಳ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:15(2022–23)
**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿ – 2020ರನ್ವಯ ಬಿಬಿಎ (Occupational Health and Safety) ಕಾರ್ಯಕ್ರಮದ ಕಾರ್ಯಯೋಜನೆ ಮತ್ತು ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:16(2022–23)
**ವಿಷಯ:** ಪಿ.ಹೆಚ್.ಡಿ. ಕಾರ್ಯಕ್ರಮಗಳ ಶಿರೋನಾಮೆಗಳನ್ನು ಬದಲಾಯಿಸುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:17(2022–23)
**ವಿಷಯ:** ಸ್ನಾತಕೋತ್ತರ ಕಂಪ್ಯೂಟರ್ ಸಾಯನ್ಸ್ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:182022–23)
**ವಿಷಯ:** ಸ್ನಾತಕೋತ್ತರ ಫುಡ್ ಸಾಯನ್ಸ್ ಆಂಡ್ ನ್ಯೂಟ್ರೀಷನ್ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:19(2022–23)
**ವಿಷಯ:** ಸ್ನಾತಕೋತ್ತರ ಭೌತಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:20(2022–23)
**ವಿಷಯ:** ಸ್ನಾತಕೋತ್ತರ ಬಯೋಟೆಕ್ನಾಲಜಿ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದೆನ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳ'ನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:21(2022–23)
**ವಿಷಯ:** ಸ್ನಾತಕೋತ್ತರ ಗಣಿತಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:22(2022–23)
**ವಿಷಯ:** ಸ್ನಾತಕೋತ್ತರ ವಸ್ತು ವಿಜ್ಞಾನ ಕಾರ್ಯಕ್ರಮಕ್ಕೆ ಅಳವಡಿಸಲಾಗಿರುವ ಎರಡು ಸಾಫ್ಟ್ ಕೋರ್ ಕೋರ್ಸ್‌ಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.
**ನಿರ್ಣಯ:** ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:23(2022–23)
**ವಿಷಯ:** ಸ್ನಾತಕೋತ್ತರ ಸಸ್ಯಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳ್‌ನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:24(2022–23)
**ವಿಷಯ:** ಸ್ನಾತಕೋತ್ತರ ಜೀವ ರಸಾಯನಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳ್‌ನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:25(2022–23)
**ವಿಷಯ:** ಸ್ನಾತಕೋತ್ತರ ಸೈಬರ್ ಸೆಕ್ಯೂರಿಟಿ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳ್‌ನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:26(2022–23)
**ವಿಷಯ:** ಸ್ನಾತಕೋತ್ತರ ವೈದ್ಯಕೀಯ ಭೌತಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳ್‌ನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:27(2022–23)
**ವಿಷಯ:** ಸ್ನಾತಕೋತ್ತರ ಇತಿಹಾಸ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪಠ್ಯಕ್ರಮದಲ್ಲಿ ಹೆಚ್ಚುವರಿಯಾಗಿ ಅಳವಡಿಸಲಾದ ಮುಕ್ತ ಆಯ್ಕೆ ಕೋರ್ಸ್‌ನ್ನು ಪುನರ್‌ಪರಿಶೀಲಿಸಲು ಅಧ್ಯಯನ ಮಂಡಳಿಗೆ ತಿಳಿಸಿ ಉಳಿದಂತೆ ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:28(2022–23) |
| **ವಿಷಯ:** | ಸ್ನಾತಕೋತ್ತರ ತುಳು ಕಾರ್ಯಕ್ರಮದ (ವಾರ್ಷಿಕ ಪದ್ಧತಿ) ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪ್ರಸ್ತಾವಿತ ಪಠ್ಯಕ್ರಮವನ್ನು ಅಧ್ಯಯನ ಮಂಡಳಿಗೆ ಪುನರ್‌ಪರಿಶೀಲಿಸಿ ಸಲ್ಲಿಸಲು ನಿರ್ಣಯಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:29(2022–23) |
| **ವಿಷಯ:** | ಸ್ನಾತಕೋತ್ತರ ಕನ್ನಡ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:30(2022–23) |
| **ವಿಷಯ:** | ಸ್ನಾತಕೋತ್ತರ ರಾಜ್ಯಶಾಸ್ತ್ರ ಕಾರ್ಯಕ್ರಮದ ಮುಕ್ತ ಆಯ್ಕೆ ಕೋರ್ಸಿನ ಪಠ್ಯಕ್ರಮದ ಅನುಮೋದನೆ ಬಗ್ಗೆ. |
| **ನಿರ್ಣಯ:** | ಪಠ್ಯಕ್ರಮವನ್ನು ಅನುಮೋದಿಸಲಾಯಿತು. ಸದರಿ ಪಠ್ಯಕ್ರಮದ ಬೋಧನೆಗೆ ಸಂಬಂಧಿಸಿ ಕಾರ್ಯಸೂಚಿಯಲ್ಲಿ ನಮೂದಿಸಲಾದ ವಿದ್ಯಾರ್ಹತೆಯುಳ್ಳ ವಿಷಯ ತಜ್ಞರುಗಳಿಂದಲೇ ಬೋಧಿಸಲು ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು. |

| | | |
|---|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:31(2022–23) | |
| **ವಿಷಯ:** | ವಾಣಿಜ್ಯ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. | |
| **ನಿರ್ಣಯ:** | 1.B.Com | ಅನುಮೋದಿಸಲಾಯಿತು. |
| | 2. B.Com – Tax Procedure & Practice | |
| | 3.B.Com – Office Management & Secretarial Practice | |
| | 4. BBA | |
| | 5. BBA (Tourism & Travel) | |
| | BBA (Logistics) | |
| | BHM | |
| | UG Programmes – Financial Education and Investment Awareness (Skill Enhancement Course) | |

| | | |
|---|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:32(2022–23) | |
| **ವಿಷಯ:** | ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. | |
| **ನಿರ್ಣಯ:** | 1. B.Sc. (Home Science) | ಅನುಮೋದಿಸಲಾಯಿತು. |
| | 2.B.Sc. – Chemistry | |
| | 3.B.Sc. – Zoology | |
| | 4.B.Sc. – Microbiology | |
| | 5.B.Sc. (Hospitality Science) | |

| | | |
|---|---|---|
| | 6.B.Sc. – Psychology | ಅನುಮೋದಿಸಲಾಯಿತು. |
| | 7.B.Sc. – Philosophy | |
| | 8.B.Sc. – Bio Chemistry | |
| | 9.B.Sc. (Fashion and Apparel design) | |
| | 10.B.Sc. – Biotechnology | |
| | 11.B.Sc. – Home Science | |
| | 12.B.Sc.–Geography (I-IV Sem) | |
| | 13.B.Sc.(Interior Design & Decoration) | |
| | 14. B.Sc. -Electronics | |
| | 15. B.Sc. – Mathematics | |
| | 16. B.Sc. – Physics | |
| | 17. B.Sc. -Botany | |
| | 18. B.Sc. – Statistics | |
| | 19.B.Sc.– (Food Technology I-IV Sem) | |
| | 20. B.Sc. - Computer Science | |
| | 21. BCA | |
| | 22. B.Sc. (Animation & Visual Effects) | |
| | 23.UG Programmes – Artificial Intelligence (Skill Enhancement Course) | |
| | 24. B.Sc. (Food Nutrition & Dietetics) B.A. | |

| | | |
|---|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಶೈ.ಸಾ.ಸ.2:33(2022–23) | |
| **ವಿಷಯ:** | ಕಲಾ ನಿಕಾಯದ ವ್ಯಾಪ್ತಿಯಡಿ ಬರುವ ಪದವಿ ಕಾರ್ಯಕ್ರಮಗಳ ಪಠ್ಯಕ್ರಮಗಳ ಅನುಮೋದನೆ ಬಗ್ಗೆ. | |
| **ನಿರ್ಣಯ:** | 1. B.A.-Secretarial Practice | ಅನುಮೋದಿಸಲಾಯಿತು. |
| | 2.B.A. – Office Practice & Management | |
| | 3. B.A. – Political Science | |
| | 4. Sanskrit | |
| | 5. B.A. – Sociology | |
| | 6. English | |
| | 7. Kodava | |
| | 8. B.A – TTM | |
| | 9. Hindi | |
| | 10. BSW | |
| | 11. Kannada | |
| | 12. B.A – Business Management | |
| | 13. B.A – Rural Development | |
| | 14. B.A – Co-operation | |
| | 15. B.A (HRD) | |
| | 16. B.A – Women’s Studies | |

| | | |
|---|---|---|
| | 17. B.A – Journalism | |
| | 18. B.A - Bharathanatyam | |
| | 19. B.A - Karnatic Music | |
| | 20. Konkani | |
| | 21. B.A – Economics | |
| | 22. UG Programmes – Constitution of India (Ability Enhancement Compulsory Course) | |
| | 23. B.A – Geography (I-IV Sem) | |
| | 24. B.A – Home Science | ಅನುಮೋದಿಸಲಾಯಿತು. |
| | 25. B.A. – Psychology | |
| | 26. B.A – Arabic | |
| | 27. Tulu | |
| | 28. French | |
| | 29. B.A. Philosophy | |
| | 30. B.A – History | |
| | 31. B.A – Ancient History & Archaeology | |
| | 32. UG Programmes – Youth Red Cross (Skill Enhancement Course for III-IV Sem) | |
| | 33. BVA | |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:34(2022–23)
**ವಿಷಯ:** ಸ್ನಾತಕೋತ್ತರ ಕಂಪ್ಯೂಟರ್ ಅಪ್ಲಿಕೇಷನ್ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:35(2022–23)
**ವಿಷಯ:** ಶಿಕ್ಷಕ ಶಿಕ್ಷಣ ಪದವಿ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:36(2022–23)
**ವಿಷಯ:** ಸ್ನಾತಕೋತ್ತರ ಶಿಕ್ಷಕ ಶಿಕ್ಷಣ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:37(2022–23)
**ವಿಷಯ:** ಸ್ನಾತಕೋತ್ತರ ಎಂಬಿಎ (ಹೆಲ್ತ್ ಸೇಫ್ಟಿ ಆಂಡ್ ಎನ್ವಿರಾನ್‌ಮೆಂಟ್) ಕಾರ್ಯಕ್ರಮದ ವಿನಿಯಮ ಮತ್ತು ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ವಿನಿಯಮ ಮತ್ತು ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:38(2022–23).
**ವಿಷಯ:** Constitution of India, Ability Enhancement Compulsory Course ನ್ನು ಬೋಧಿಸಲು ಉಪನ್ಯಾಸಕರ ವಿದ್ಯಾರ್ಹತೆ ನಿಗದಿ ಪಡಿಸುವ ಬಗ್ಗೆ
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:39(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Heartfulness Chair ಸ್ಥಾಪಿಸುವ ಕುರಿತು.
**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:40(2022–23)
**ವಿಷಯ:** ಪಿ.ಜಿ. ಡಿಪ್ಲೋಮಾ ಇನ್ ಪೀಪಲ್ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದ ತಿದ್ದುಪಡಿ ವಿನಿಯಮದ ಅನುಮೋದನೆ ಬಗ್ಗೆ.
**ನಿರ್ಣಯ:** ತಿದ್ದುಪಡಿ ವಿನಿಯಮವನ್ನು ಅನುಮೋದಿಸಲಾಗಿ ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:41(2022–23)
**ವಿಷಯ:** ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿ ಪ್ರವೇಶಾರ್ಹತೆ ತಿದ್ದುಪಡಿ ಅನುಮೋದನೆ ಬಗ್ಗೆ.
**ನಿರ್ಣಯ:** ತಿದ್ದುಪಡಿ ವಿನಿಯಮವನ್ನು ಅನುಮೋದಿಸಲಾಗಿ ಮಾನ್ಯ ಕುಲಾಧಿಪತಿಗಳ ಅಂಕಿತಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.2:42(2022–23)
**ವಿಷಯ:** ಸ್ನಾತಕೋತ್ತರ ಜೀವವಿಜ್ಞಾನ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಪರಿಷ್ಕೃತ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜಿನ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ವಿದ್ಯಾರ್ಥಿಗಳಿಗೆ ಪರೀಕ್ಷಾ ಕಾರ್ಯ ಮತ್ತು ಮೌಲ್ಯಮಾಪನ ಕಾರ್ಯಗಳಿಗೆ ತೊಂದರೆಯಾಗದಂತೆ ದಸರಾ ರಜೆಯನ್ನು ದಿನಾಂಕ 29.09.2022 ರಿಂದ ದಿನಾಂಕ 05.10.2022 ರವರೆಗೆ ನೀಡಲು ನಿರ್ಣಯಿಸಲಾಯಿತು.

2. ಮಂಗಳೂರು ವಿಶ್ವವಿದ್ಯಾನಿಲಯದ 43ನೇ ಸಂಸ್ಥಾಪಕರ ದಿನಾಚರಣೆಯನ್ನು ದಿನಾಂಕ 29.09.2022ರಂದು ಅಪರಾಹ್ನ ಗಂಟೆ 2.30ಕ್ಕೆ ಮಂಗಳ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು ಸಮಾರಂಭಕ್ಕೆ ಡಾ.ಭರತ್‌ಚಂದ್ರ ಅಂತರ್‌ರಾಷ್ಟ್ರೀಯ ತರಬೇತುದಾರರು, ಬೆಂಗಳೂರು ಇವರು ಸಂಸ್ಥಾಪನಾ ದಿನಾಚರಣೆಯ ವಿಶೇಷ ಉಪನ್ಯಾಸವನ್ನು ನೀಡಲಿರುವ ವಿಚಾರವನ್ನು ತಿಳಿಸುತ್ತಾ, ಸದರಿ ಕಾರ್ಯಕ್ರಮದಲ್ಲಿ ಸಾಧಕರುಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಾಗಿ ಹಾಗೂ ಎಲ್ಲರೂ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗಿ ಮಾನ್ಯ ಕುಲಪತಿಯವರು ತಿಳಿಸಿದರು.

3. ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಕಾರ್ಯಕ್ರಮಗಳಿಗೆ ಅನುಷ್ಠಾನಗೊಳಿಸಲಾದ ರಾಷ್ಟ್ರೀಯ ಶಿಕ್ಷಣ ನೀತಿ–2020ರ ವಿನಿಯಮಗಳ ಪ್ರಕಾರ ಪಠ್ಯಕ್ರಮಗಳಲ್ಲಿ ಅಳವಡಿಸಲಾಗಿರುವ Skill Enhancement Course ರಡಿಯ Artificial Intelligence ಕೋರ್ಸನ್ನು ಬೋಧಿಸುವ ಉಪನ್ಯಾಸಕರ ಬೋಧನಾರ್ಹತೆಗೆ ಸಂಬಂಧಿಸಿದಂತೆ ಪದವಿ ಮಟ್ಟದ ಕಂಪ್ಯೂಟರ್ ಸಾಯನ್ಸ್ ಅಧ್ಯಯನ ಮಂಡಳಿಯಲ್ಲಿ ಮಂಡಿಸಿ ಕ್ರಮಕ್ಕೈಗೊಳ್ಳಲು ನಿರ್ಣಯಿಸಲಾಯಿತು.

4. ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಸಂಬಂಧಿಸಿದ ಕಾರ್ಯಸೂಚಿಗಳು ಅನುಬಂಧಗಳನ್ನು ಇನ್ನು ಮುಂದಿನ ದಿನಗಳಲ್ಲಿ ಮಿಂಚಂಚೆ ಮುಖಾಂತರವೇ ಸಲ್ಲಿಸಲಾಗುವ ವಿಚಾರವನ್ನು ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸಿದರು.

5. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿ ನೀಡಲಾಗುವ ಪರೀಕ್ಷಾ ಸಂಭಾವನೆಯನ್ನು ಮೌಲ್ಯಮಾಪನ ಕೇಂದ್ರದಲ್ಲಿಯೇ (Spot Payment) ಪಾವತಿಗೆ ಕ್ರಮಕ್ಕೈಗೊಳ್ಳಲಾಗುವುದಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು.

6. ಮಂಗಳೂರು ವಿಶ್ವವಿದ್ಯಾನಿಲಯದ ಸಪ್ಟೆಂಬರ್ 2022ನೇ ಸಾಲಿನ ಪದವಿ ಮಟ್ಟದ ಬಿ.ಬಿ.ಎ. ಕಾರ್ಯಕ್ರಮದ ದ್ವಿತೀಯ ಸೆಮೆಸ್ಟರಿನ ಕನ್ನಡ ಭಾಷಾ ಪರೀಕ್ಷಾ ಪ್ರಶ್ನಾ ಪತ್ರಿಕೆಯಲ್ಲಿ ಉಂಟಾಗಿರುವ ಗೊಂದಲಗಳ ಬಗ್ಗೆ ಸದಸ್ಯರೊಬ್ಬರು ಸಭೆಯಲ್ಲಿ ಚರ್ಚಿಸಿದ ಹಿನ್ನೆಲೆಯಲ್ಲಿ ಮಾನ್ಯ ಕುಲಪತಿಯವರು ಈ ಬಗ್ಗೆ ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆಯು ಗಂಭೀರವಾಗಿ ಚರ್ಚಿಸಿ ತಪ್ಪಿತಸ್ಥರ ವಿರುದ್ಧ ನಿಯಾಮನುಸಾರ ನಿರ್ಣಯ ಕೈಗೊಂಡಿರುವ ವಿಚಾರವನ್ನು ಸಭೆಗೆ ತಿಳಿಸಿದರು.

   ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿ ವಿಶ್ವವಿದ್ಯಾನಿಲಯದಲ್ಲಿ Standard Operating Procedure (SOP) (ಪ್ರಾಮಾಣಿತ ಕಾರ್ಯಾಚರಣೆಯ ವಿಧಾನ)ವನ್ನು ಈಗಾಗಲೇ ಅಳವಡಿಸಿಕೊಂಡು ಕಾರ್ಯನಿರ್ವಹಿಸುತ್ತಿರುವ ಬಗ್ಗೆಯೂ ತಿಳಿಸಲಾಯಿತು.

7. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳ ತಯಾರಿಗೆ ಸಂಬಂಧಿಸಿ ಅಧ್ಯಯನ ಮಂಡಳಿ ಸಭೆಗಳಿಗೆ ವಿಷಯ ತಜ್ಞರುಗಳನ್ನು ಕಡ್ಡಾಯವಾಗಿ ಆಹ್ವಾನಿಸಿಕೊಂಡು ಅಧ್ಯಯನ ಮಂಡಳಿ ಸಭೆಗಳನ್ನು ನಡೆಸಬೇಕಾಗಿ ಮಾನ್ಯ ಕುಲಪತಿಯವರು ಸಭೆಯಲ್ಲಿ ಸಲಹೆ ನೀಡಿದರು.

8. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿದಂತೆ ರಚಿಸಲಾದ ಕೋರ್ ಸಮಿತಿಗೆ ಡಾ. ಭಾಸ್ಕರ್ ಶೆಟ್ಟಿ, ಪ್ರಾಂಶುಪಾಲರು, ಡಾ. ಜಿ.ಶಂಕರ್ ಸರಕಾರಿ ಪ್ರಥಮ ದರ್ಜೆ ಕಾಲೇಜು, ಅಜ್ಜರಕಾಡು, ಉಡುಪಿ ಇವರನ್ನು ಸೇರ್ಪಡೆಗೊಳಿಸಲು ಮಾನ್ಯ ಕುಲಪತಿಯವರು ಸಭೆಯಲ್ಲಿ ತಿಳಿಸಿದರು.

9. ಮಾನ್ಯ ಕುಲಸಚಿವರು ಎಲ್ಲಾ ಅಧ್ಯಯನ ಮಂಡಳಿ ಅಧ್ಯಕ್ಷರುಗಳಿಗೆ, ಸದ್ಯರುಗಳಿಗೆ, ನಿಕಾಯಗಳ ಡೀನರುಗಳಿಗೆ ಕ್ಲಪ್ತ ಸಮಯದಲ್ಲಿ ಪಠ್ಯಕ್ರಮಗಳನ್ನು ಪರಿಷ್ಕರಿಸಿಕೊಂಡು ನಿಕಾಯಗಳ ಸಭೆಗಳನ್ನು ನಡೆಸಿಕೊಂಡು ಕಾಲಮಿತಿಯೊಳಗೆ ಶೈಕ್ಷಣಿಕ ಮಂಡಳಿ ಸಭೆಗೆ ಕಾರ್ಯಸೂಚಿ ಮಂಡಿಸಲು ಸಹಕರಿಸಿದ್ದಕ್ಕೆ ಕೃತಜ್ಞತೆಯನ್ನು ಅರ್ಪಿಸಿದರು.

ಶೈಕ್ಷಣಿಕ ಮಂಡಳಿ ಸಭೆಗೆ ಹಾಜರಾದ ಎಲ್ಲಾ ಸದಸ್ಯರುಗಳಿಗೆ, ವಿಶೇಷ ಆಹ್ವಾನಿತರುಗಳಿಗೆ, ಮಾಧ್ಯಮ ಮಿತ್ರರುಗಳಿಗೆ ಮತ್ತು ಸದರಿ ಸಭೆಗೆ ಕಾರ್ಯಸೂಚಿ ಮಂಡಿಸಲು ಸಹಕರಿಸಿದ ಶೈಕ್ಷಣಿಕ ವಿಭಾಗದ ಸಿಬ್ಬಂದಿಗಳಿಗೆ ಮತ್ತು ಸದರಿ ಸಭೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಸಹಕರಿಸಿದ ಸಿಂಡಿಕೇಟು ವಿಭಾಗದ ಸಿಬ್ಬಂದಿಗಳಿಗೂ ಕೃತಜ್ಞತೆಯನ್ನು ಸಲ್ಲಿಸಿದರು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/–
ಕುಲಸಚಿವರು.

ಸಹಿ/–
ಕುಲಪತಿಗಳು.